First gov. order
Annexure III

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಎಜುಕೇಷನ್ ಅಂಡ್ ಛಾರಿಟೇಬಲ್ ಟ್ರಸ್ಟ್, ಎಸ್.ಸಿ.ಎಸ್. ಆಸ್ಪತ್ರೆ, ಮಂಗಳೂರು ಇವರಿಗೆ 2002-2003ನೇ ಸಾಲಿನಿಂದ ಬಿ.ಎ.ಎಂ.ಎಸ್. ಕೋರ್ಸನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಆಕುಕ 505 ಪಿಇಎಂ 98, ದಿನಾಂಕ: 16-3-99.
2) ಕುಲಸಚಿವರು, ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸಿಎ:ಎಎ:ಎಫ್‌ಎ-53:99-2000 ದಿನಾಂಕ: 29-4-99.
3) ಸರ್ಕಾರದ ಪತ್ರ ಸಂಖ್ಯೆ: ಆಕುಕ 256 ಪಿಇಎಂ 99, ದಿನಾಂಕ: 29-7-99.
4) ರಿಟ್ ಅರ್ಜಿ ಸಂಖ್ಯೆ: 19506:99(ಇಡಿಎನ್-ಆರ್‌ಇಎಸ್) ದಿನಾಂಕ: 20-10-2000 ರಂದು ಮಾನ್ಯ ಉಚ್ಚನ್ಯಾಯಾಲಯವು ನೀಡಿರುವ ತೀರ್ಪು.
5) ಕುಲಸಚಿವರು, ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವ-ವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸಿಎ: ಎಎ:ಎಫ್‌ಎ-1:2001-2002:3724. ದಿನಾಂಕ: 24-2-2001.
6) ಸರ್ಕಾರದ ಪತ್ರ ಸಂಖ್ಯೆ: ಆಕುಕ 177 ಪಿಇಎಂ 2001, ದಿನಾಂಕ: 13-6-2001.
7) ಅಪೀಲ್ ಸಂಖ್ಯೆ: 1060:2001 ದಿನಾಂಕ: 19-12-2001ರಲ್ಲಿ ಮಾನ್ಯ ಉಚ್ಚನ್ಯಾಯಾಲಯವು ನೀಡಿರುವ ತೀರ್ಪು.
8) ಸರ್ಕಾರದ ವಕೀಲರು ಮಾನ್ಯ ಉಚ್ಚನ್ಯಾಯಾಲಯ ಇವರ ಪತ್ರ ಸಂಖ್ಯೆ: 9481:ಎಜಿ:01, ದಿನಾಂಕ: 24-12-2001.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರಲ್ಲಿ ರಾಜ್ಯದಲ್ಲಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಕಾಲೇಜುಗಳನ್ನು ಹೊರತುಪಡಿಸಿ ಉಳಿದ ಅಂದರೆ ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ಪದ್ಧತಿ ಕಾಲೇಜುಗಳನ್ನು ದಿನಾಂಕ: 16-3-99 ರಿಂದ ಹೊಸದಾಗಿ ತೆರೆಯುವುದನ್ನು 3 ವರ್ಷಗಳ ಕಾಲ ನಿಷೇಧಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರಲ್ಲಿ ಕುಲಸಚಿವರು, ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಕರ್ನಾಟಕ ಎಜುಕೇಷನ್ ಅಂಡ್ ಛಾರಿಟೇಬಲ್ ಟ್ರಸ್ಟ್, ಎಸ್.ಸಿ.ಎಸ್. ಆಸ್ಪತ್ರೆ, ಮಂಗಳೂರು ಇವರಿಗೆ 1999-2000ನೇ ಸಾಲಿನಿಂದ ಬಿ.ಎ.ಎಂ.ಎಸ್. ಕೋರ್ಸನ್ನು ಪ್ರಾರಂಭಿಸಲು ಸರ್ಕಾರದ ಆದೇಶ ದಿನಾಂಕ: 16-3-99 ರಂತೆ ವಿಶ್ವವಿದ್ಯಾಲಯದ ಸಿಂಡಿಕೇಟ್ ಹೊಸದಾಗಿ ಸಂಲಗ್ನತೆಗೆ ಶಿಫಾರಸ್ಸು ಮಾಡಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ:(3) ದಿನಾಂಕ: 29-7-99ರ ಸರ್ಕಾರದ ಪತ್ರದಲ್ಲಿ ದಿನಾಂಕ: -4-99 ರಂತೆ ಹೊಸದಾಗಿ ಆಯುರ್ವೇದ ಕಾಲೇಜು ತೆರೆಯುವ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(4)ರಲ್ಲಿ ಕರ್ನಾಟಕ ಎಜುಕೇಷನ್ ಅಂಡ್ ಛಾರಿಟೇಬಲ್ ಟ್ರಸ್ಟ್, ಮಂಗಳೂರು ಇವರು ಸರ್ಕಾರದ ಆದೇಶದ ವಿರುದ್ಧ ಮಾನ್ಯ ಉಚ್ಚನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 19506:99ನ್ನು ಹೂಡಿದ್ದು, ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ: 20-12-2000 ರಂದು ತೀರ್ಪು ನೀಡಿ ದಿನಾಂಕ: 16-3-99ರ ಆದೇಶವನ್ನು ರದ್ದುಗೊಳಿಸಿ ಸದರಿ ಸಂಸ್ಥೆಗೆ ಅರ್ಜಿಯನ್ನು ಹೊಸದಾಗಿ ಪರಿಗಣಿಸಲು ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(5)ರಲ್ಲಿ ಕುಲಸಚಿವರು, ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ದಿನಾಂಕ: 24-2-2001ರ ಪತ್ರದಲ್ಲಿ ಕರ್ನಾಟಕ ಎಜುಕೇಷನ್ ಛಾರಿಟೇಬಲ್ ಟ್ರಸ್ಟ್, ಮಂಗಳೂರು ಇವರಿಗೆ 2001-2002ನೇ ಸಾಲಿಗೆ 40 ವಿದ್ಯಾರ್ಥಿಗಳ ಪ್ರವೇಶ ಸಾಮರ್ಥ್ಯದೊಂದಿಗೆ ಹೊಸದಾಗಿ ಬಿ.ಎ.ಎಂ.ಎಸ್. ಕೋರ್ಸ್‌ಗೆ ಸಂಲಗ್ನತೆ ನೀಡಲು ಕರ್ನಾಟಕ ಸರ್ಕಾರ ಹಾಗೂ ಸಿ.ಸಿ.ಐ.ಎಂ., ನವದೆಹಲಿ ಇವರ ಅನುಮತಿ ಪಡೆದ ನಂತರ [illegible]

7) ಸಂಸ್ಥೆಯವರು ಕಾಲೇಜು ಪ್ರಾರಂಭಿಸಲು ಬೇಕಾದ ಪಠ್ಯವನ್ನು ಹಾಗೂ ಸಾಮಗ್ರಿಗಳ ಮಾಹಿತಿಯನ್ನು ಭಾರತೀಯ ವೈದ್ಯ ಪದ್ಧತಿಗಳ ನಿರ್ದೇಶಕರಿಂದ ಪಡೆಯತಕ್ಕದ್ದು.

8) ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಆಯುರ್ವೇದ ಕಾಲೇಜುಗಳು ಕನಿಷ್ಠ 100 ಹಾಸಿಗೆಗಳುಳ್ಳ ಆಸ್ಪತ್ರೆಯನ್ನು ಹೊಂದಿ ವಿವಿಧ ಹೊರ ರೋಗಿಗಳ ತಪಾಸಣಾ ಮತ್ತು ಇತರ ಸೌಲಭ್ಯಗಳನ್ನು ಹೊಂದಿ, ಭವಿಷ್ಯದಲ್ಲಿ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆಗನುಗುಣವಾಗಿ ಬೇಕಾಗುವ ಇತರೆ ಎಲ್ಲಾ ಸೌಕರ್ಯಗಳನ್ನು ಪೂರೈಸತಕ್ಕದ್ದು.

9) ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಸೂಚಿಸಿರುವ ಮಾರ್ಗಸೂಚಿ ಷರತ್ತುಗಳನ್ನು ನಿಗದಿತ ಅವಧಿಯೊಳಗೆ ಪೂರೈಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನಂಜುಂಡ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಪ್ರತಿ:-

1) ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಇಲಾಖೆ, ಬೆಂಗಳೂರು
2) ಕುಲಸಚಿವರು, ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು-560041
3) ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
4) ಸಚಿವ ಸಂಪುಟ ಶಾಖೆ (ವಿಷಯ ಸಂಖ್ಯೆ:ಸಿ.366:2002) ದಿನಾಂಕ:21-8-2002.
5) ಛೇರ್ಮನ್: ಕಾರ್ಯದರ್ಶಿ, ಕರ್ನಾಟಕ ಎಜುಕೇಷನಲ್ ಅಂಡ್ ಛಾರಿಟೇಬಲ್ ಟ್ರಸ್ಟ್, ಎಸ್.ಸಿ.ಎಸ್. ಆಸ್ಪತ್ರೆ, ಅಪ್ಪರ ಬೆಂದೂರು, ಮಂಗಳೂರು-575002, ಕರ್ನಾಟಕ.
6) ಕಾರ್ಯದರ್ಶಿ, ಭಾರತೀಯ ವೈದ್ಯಕೀಯ ಪದ್ಧತಿಯ ಕೇಂದ್ರೀಯ ಪರಿಷತ್ ಇನ್ಸ್‌ಟಿಟ್ಯೂಷನಲ್ ಏರಿಯಾ, ಜಾನಕೀಪುರಿ, ನವದೆಹಲಿ-110058.
7) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ, ವಿಧಾನಸೌಧ, ಬೆಂಗಳೂರು.
8) ಕಾರ್ಯದರ್ಶಿ, ಉಪಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
9) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಎಜುಕೇಷನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ , ಕರ್ನಾಟಕ ಆಯುರ್ವೇದಿಕ್ ವೈದ್ಯಕೀಯ ಕಾಲೇಜು, ಮಂಗಳೂರು ಇವರಿಗೆ 2002-2003 ನೇ ಸಾಲಿನಿಂದ ಬಿ.ಎ.ಎಂ.ಎಸ್. ಕೋರ್ಸಿನ ಪ್ರವೇಶ ಮಿತಿಯನ್ನು 40 ರಿಂದ 50 ಕ್ಕೆ (10 ಸೀಟುಗಳು) ಹೆಚ್ಚಿಸಲು ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ: ೧) ಅಧ್ಯಕ್ಷರು, ಕರ್ನಾಟಕ ಎಜುಕೇಷನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ , ಮಂಗಳೂರು ಇವರ ಪತ್ರ ದಿನಾಂಕ: 5.10.2002. 29.7.2003.

೨) ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸಿಎ ಎಫ್: 2: 2002-2003, ದಿನಾಂಕ: 17.10.2003.

ಪ್ರಸ್ತಾವನೆ:

ಮೇಲೆ (೧) ರಲ್ಲಿ ಓದಲಾದ ಪತ್ರಗಳಲ್ಲಿ ಅಧ್ಯಕ್ಷರು, ಕರ್ನಾಟಕ ಎಜುಕೇಷನಲ್ ಅಂಡ್ ಚಾರಿಟೇಬಲ್ ಟ್ರಸ್ಟ್, ಮಂಗಳೂರು ಇವರು ಭಾರತೀಯ ವೈದ್ಯಕೀಯ ಪದ್ಧತಿಯ ಕೇಂದ್ರೀಯ ಪರಿಷತ್, ನವದೆಹಲಿ ಇವರು 2002-2003 ನೇ ಸಾಲಿಗೆ 50 ವಿದ್ಯಾರ್ಥಿಗಳಿಗೆ ಅನುಮತಿ ನೀಡಿರುತ್ತಾರೆ. ಆದರಂತೆ ನಮ್ಮ ಕಾಲೇಜಿನ ಬಿ.ಎ.ಎಂ.ಎಸ್. ಕೋರ್ಸಿನ ಪ್ರವೇಶ ಮಿತಿಯನ್ನು 2002-2003 ನೇ ಸಾಲಿನಿಂದ 50 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಅನುಮತಿ ನೀಡಲು ಆದೇಶ ನೀಡಬೇಕಾಗಿ ಕೋರಿರುತ್ತಾರೆ.

ಮೇಲೆ (೨) ರಲ್ಲಿ ಓದಲಾದ ಪತ್ರಗಳಲ್ಲಿ ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಕರ್ನಾಟಕ ಎಜುಕೇಷನಲ್ ಅಂಡ್ ಚಾರಿಟೇಬಲ್ ಟ್ರಸ್ಟ್, ಕರ್ನಾಟಕ ಆಯುರ್ವೇದಿಕ್ ವೈದ್ಯಕೀಯ ಕಾಲೇಜು, ಮಂಗಳೂರು ಇವರಿಗೆ ಭಾರತೀಯ ವೈದ್ಯಕೀಯ ಪದ್ಧತಿಯ ಕೇಂದ್ರೀಯ ಪರಿಷತ್, ನವದೆಹಲಿ ಇವರ ಪತ್ರ ಸಂಖ್ಯೆ: ಎಫ್. 4-22 : 2002: ಆಯು, ದಿನಾಂಕ: 30.9.2002 ರಲ್ಲಿನ ಶಿಫಾರಸ್ಸಿನಂತೆ 2002-2003 ನೇ ಸಾಲಿಗೆ ಬಿ.ಎ.ಎಂ.ಎಸ್. ಕೋರ್ಸಿನ ಪ್ರವೇಶ ಮಿತಿಯನ್ನು 40 ರಿಂದ 50 ಕ್ಕೆ (10 ಸೀಟುಗಳು) ಹೆಚ್ಚಿಸಲು ಶಿಫಾರಸ್ಸು ಮಾಡಿದ್ದು, ಆದರಂತೆ ಸೀಟುಗಳನ್ನು ಹೆಚ್ಚಿಸಲು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಒಪ್ಪಿದೆ.

ಸರ್ಕಾರವು ವಿಶ್ವವಿದ್ಯಾಲಯದ ಶಿಫಾರಸ್ಸನ್ನು ಪರಿಶೀಲಿಸಿ ಪರಿಗಣಿಸಿದೆ. ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ಆಕುಕ . 146 ಪಿಟಿಡಿ 2004, ಬೆಂಗಳೂರು. ದಿನಾಂಕ: 28-2-2004**

1994 ನೇ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 45 (10) (ಬಿ) ಪ್ರಕರಣದಡಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಎಜುಕೇಷನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ , ಕರ್ನಾಟಕ ಆಯುರ್ವೇದಿಕ್ ವೈದ್ಯಕೀಯ ಕಾಲೇಜು, ಮಂಗಳೂರು ಇವರಿಗೆ 2002-2003 ನೇ ಸಾಲಿನಿಂದ ಬಿ.ಎ.ಎಂ.ಎಸ್. ಕೋರ್ಸಿನ ಪ್ರವೇಶ ಮಿತಿಯನ್ನು 40 ರಿಂದ 50 ಕ್ಕೆ (10 ಸೀಟುಗಳು) ಹೆಚ್ಚಿಸಲು ಈ ಕೆಳಕಂಡ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಟ್ಟು ಸಂಯೋಜನೆ ನೀಡಲು ಶಿಫಾರಸ್ಸು ಮಾಡಿದೆ.

೧) ಭಾರತೀಯ ವೈದ್ಯಕೀಯ ಕೇಂದ್ರೀಯ ಪರಿಷತ್ತು , ನವದೆಹಲಿ ಇವರ ಅನುಮತಿ ಪಡೆಯತಕ್ಕದ್ದು

೨) ಈ ಸಂಸ್ಥೆಯು ಸಂಬಂಧಪಟ್ಟ ರಾಜ್ಯಸರ್ಕಾರದ ಸಕ್ಷಮ ಪ್ರಾಧಿಕಾರದ ಮುಖಾಂತರ ಭ ವೈದ್ಯಕೀಯ ಕೇಂದ್ರೀಯ ಪರಿಷತ್ತಿನೊಂದಿಗೆ ಪತ್ರ ವ್ಯವಹರಿಸತಕ್ಕದ್ದು.

೩) ಭಾರತೀಯ ವೈದ್ಯಕೀಯ ಕೇಂದ್ರೀಯ ಪರಿಷತ್ತಿನವರು ನಿಗದಿಪಡಿಸುವ ಶಿಕ್ಷ ಗುಣಮಟ್ಟವನ್ನು ನಿರ್ವಹಿಸತಕ್ಕದ್ದು ಹಾಗೂ ನಿಗದಿಪಡಿಸಿದ ಸೌಲಭ್ಯಗಳನ್ನು ಒದಗಿಸುವುದು.

೪) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ವಿಧಿಸುವ ಷರತ್ತುಗಳನ್ನು ಪೂರೈಸತಕ್ಕದ್ದು.

೫) ಸದರಿ ಕೋರ್ಸಿಗೆ ಹಾಗೂ ಕಾಲೇಜಿಗೆ ಸಂಬಂಧಿಸಿದಂತೆ ಸರ್ಕಾರದಿಂದ ಯಾವುದೇ ಅನುದಾನ ಹಾಗೂ ಸೌಲಭ್ಯಗಳನ್ನು ನೀಡಲಾಗುವುದಿಲ್ಲ.

೬) ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶದ ನಿಯಮಾವಳಿಗಳಿಗೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸದರಿ ಸಂಸ್ಥೆಯು ಬದ್ಧರಾಗಿರತಕ್ಕದ್ದು.

೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಇಲಾಖೆ, ಭಾರತ ಸರ್ಕಾರ, ನವದೆಹಲಿ ಇವರ ಅನುಮತಿ ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. [illegible])
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ವೈದ್ಯಕೀಯ ಶಿಕ್ಷಣ)

ಇವರಿಗೆ:

೧)ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು.
೨)ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ಇಲಾಖೆ, ಬೆಂಗಳೂರು.
೩)ಪ್ರಾಂಶುಪಾಲರು, ಕರ್ನಾಟಕ ಎಜುಕೇಷನಲ್ ಅಂಡ್ ಚಾರಿಟೇಬಲ್ ಟ್ರಸ್ಟ್ , ಕರ್ನಾಟಕ ಆಯುರ್ವೇದಿಕ್ ವೈದ್ಯಕೀಯ ಕಾಲೇಜು, ಮಂಗಳೂರು
೪) Secretary, Central Council of indian Medicines, Institutional Area, Janak puri, New Delhi-110058.
೫) The Secretary, Government of India, Ministry of Health & Family Welfare, Department of Inidan System of Medicine & Homoeopathy, EP Cell, IRC Building, New Delhi-110001.
೬)ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
೭)ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
೮)ಕಾರ್ಯದರ್ಶಿ(ವೈದ್ಯಕೀಯ ಶಿಕ್ಷಣ), ಉಪಕಾರ್ಯದರ್ಶಿ(ವೈದ್ಯಕೀಯ ಶಿಕ್ಷಣ); ಇವರ ಆಪ್ತ ಶಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
೯) ಅಧ್ಯಕ್ಷರು, ಸಚಿವರುಗಳ ಪರಿಶೀಲನಾ ಸಮಿತಿ, ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
೧೦)ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇವರಿಗೆ 02 ಹೊಸ ತಜ್ಞತೆಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**
1. ಭಾರತ ಸರ್ಕಾರದ ಆಯುಷ್ ಇಲಾಖೆಯ ಪತ್ರ ಸಂಖ್ಯೆ:F.No.R-14011/ 11/2013-EP(IM-1), ದಿನಾಂಕ:22.09.2014
2. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರಸಂಖ್ಯೆ:ಆಯುಷ್/102/ಅಭಿವೃದ್ಧಿ(1)/2014-15, ದಿ:19.11.2014.

****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಭಾರತ ಸರ್ಕಾರದ ಆಯುಷ್ ಇಲಾಖೆಯ ಪತ್ರದಲ್ಲಿ ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇವರಿಗೆ 2014-15ನೇ ಶೈಕ್ಷಣಿಕ ಸಾಲಿನಿಂದ ಶಲ್ಯತಂತ್ರ ಮತ್ತು ದ್ರವ್ಯಗುಣ ತಜ್ಞತೆಗಳಲ್ಲಿ ತಲಾ 05 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿಯನ್ನು ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರು ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇವರಿಗೆ 2014-15ನೇ ಶೈಕ್ಷಣಿಕ ಸಾಲಿನಿಂದ ಶಲ್ಯತಂತ್ರ ಮತ್ತು ದ್ರವ್ಯಗುಣ ತಜ್ಞತೆಗಳಲ್ಲಿ ತಲಾ 05 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರವು ನೀಡಿರುವ ನಿರಾಕ್ಷೇಪಣಾ ಪತ್ರದ ಆಧಾರದ ಮೇಲೆ ಕೇಂದ್ರ ಸರ್ಕಾರವು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿ ನೀಡಿದೆ ಹಾಗೂ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕೂಡ Consent of Affiliation ನೀಡಿದೆಯೆಂದು ತಿಳಿಸುತ್ತಾ, ಸದರಿ ಅನುಮತಿ ಪ್ರಮಾಣ ಪತ್ರಗಳ ಆಧಾರದ ಮೇಲೆ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 347 ಪಿಟಿಡಿ 2014, ಬೆಂಗಳೂರು, ದಿನಾಂಕ:01.01.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇವರಿಗೆ 2014-15ನೇ ಶೈಕ್ಷಣಿಕ ಸಾಲಿನಿಂದ ಶಲ್ಯತಂತ್ರ ಮತ್ತು ದ್ರವ್ಯಗುಣ ತಜ್ಞತೆಗಳಲ್ಲಿ ತಲಾ 05 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅಪಳಿತಾತ್ಮಕ ಮಂಜೂರಾತಿ ನೀಡಿದೆ.

1. ಕೇಂದ್ರ ಸರ್ಕಾರದ ಅನುಮತಿ ಪತ್ರದಲ್ಲಿ ಗಮನಿಸಿರುವ ನ್ಯೂನ್ಯತೆಗಳನ್ನು ಸರಿಪಡಿಸಿಕೊಳ್ಳತಕ್ಕದ್ದು.
2. ಸರ್ಕಾರಿ ಸೀಟುಗಳ ಹಂಚಿಕೆ ಮತ್ತು ಶುಲ್ಕಗಳ ಬಗ್ಗೆ ಹಾಲಿ ಜಾರಿಯಲ್ಲಿರುವ ಎಲ್ಲಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
3. ಸಂಯೋಜನೆಯ ಬಗ್ಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.

ATTESTED

Principal
Karnataka Ayurveda Medical College
KECT Towers, Hoigebail
Ashoknagar, Mangalore 06

4. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ವಿಧಿಸುವ ಷರತ್ತುಗಳನ್ನು ಪೂರೈಸತಕ್ಕದ್ದು.
5. ಸದರಿ ಕೋರ್ಸಿಗೆ ಸಂಬಂಧಿಸಿದಂತೆ ಕಾಲೇಜಿಗೆ ರಾಜ್ಯ ಸರ್ಕಾರದಿಂದ ಯಾವುದೇ ಅನುದಾನ ಹಾಗೂ ಸೌಲಭ್ಯ ನೀಡಲಾಗುವುದಿಲ್ಲ.
6. ಅನುಮೋದಿತ ಸ್ನಾತಕೋತ್ತರ ಕೋರ್ಸ್‌ಗಳ ಸೀಟುಗಳಲ್ಲಿ ಶೇಕಡ 25ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಬಿಟ್ಟುಕೊಡತಕ್ಕದ್ದು.
7. ಶುಲ್ಕ ನಿಗದಿಗೆ ಸಂಬಂಧಿಸಿದಂತೆ ಸರ್ಕಾರವು ವಿಧಿಸಿರುವ/ವಿಧಿಸಬಹುದಾದ ಷರತ್ತುಗಳು/ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
8. ಕೇಂದ್ರ ಸರ್ಕಾರ ವಿಧಿಸಿರುವ ಹಾಗೂ ವಿಧಿಸಬಹುದಾದ ಎಲ್ಲಾ ಷರತ್ತುಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
9. ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಲಗ್ನತೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಪಿ.ಆರ್. ರವೀಂದ್ರ)
ಸರ್ಕಾರದ ಉಪ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ:

1) ಪ್ರಧಾನ ಮಹಾಲೇಖಪಾಲರು(ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು- 560 001
2) ಕುಲಪತಿಗಳು/ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, ಬೆಂಗಳೂರು.
3) ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಧನ್ವಂತರಿ ರಸ್ತೆ, ಬೆಂಗಳೂರು-9.
4) ಪ್ರಾಚಾರ್ಯರು, ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಕೆ.ಇ.ಸಿ.ಟಿ. ಗೋಪುರ, ಪೊಗ್ಗೆಟ್ಟಿಲು, ಅಶೋಕನಗರ ಪೋಸ್ಟ್, ಮಂಗಳೂರು-575 006, ದಕ್ಷಿಣ ಕನ್ನಡ.
5) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
7) ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2015-16ನೇ ಶೈಕ್ಷಣಿಕ ಸಾಲಿನಿಂದ ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇಲ್ಲಿನ ಪದವಿ ಕೋರ್ಸ್‌ನ ಪ್ರವೇಶ ಮಿತಿ ಹೆಚ್ಚಿಸಲು ಹಾಗೂ ಸ್ನಾತಕೋತ್ತರ ಕೋರ್ಸ್‌ಗಳನ್ನು ಹೊಸದಾಗಿ ಪ್ರಾರಂಭಿಸುವ ಬಗ್ಗೆ-ಆದೇಶ.

**ಓದಲಾಗಿದೆ:** 1. ಭಾರತ ಸರ್ಕಾರದ ಆಯುಷ್. ಇಲಾಖೆಯ ಪತ್ರ ಸಂಖ್ಯೆ: No.R.14011/20/2014-EP (IM-1), ದಿನಾಂಕ:30.10.2015.

2. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರಸಂಖ್ಯೆ:ಆಯುಷ್/91/ಅಭಿವೃದ್ಧಿ(3)/2015-16, ದಿ:02.11.2015.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಭಾರತ ಸರ್ಕಾರದ ಆಯುಷ್ ಇಲಾಖೆಯ ಪತ್ರದಲ್ಲಿ ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್.ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100ಕ್ಕೆ ಹೆಚ್ಚಿಸಲು ಹಾಗೂ ಸ್ನಾತಕೋತ್ತರ ಕೋರ್ಸ್‌ಗಳಾದ ಕಾಯಚಿಕಿತ್ಸಾ-05, ಪಂಚಕರ್ಮ-05 ಮತ್ತು ರಸಶಾಸ್ತ್ರ & ಭೈಷಜ್ಯಕಲ್ಪನ-05 ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿಯನ್ನು ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಬೆಂಗಳೂರು ಇವರು ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್.ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100ಕ್ಕೆ ಹೆಚ್ಚಿಸಲು ಹಾಗೂ ಸ್ನಾತಕೋತ್ತರ ಕೋರ್ಸ್‌ಗಳಾದ ಕಾಯಚಿಕಿತ್ಸಾ-05, ಪಂಚಕರ್ಮ-05 ಮತ್ತು ರಸಶಾಸ್ತ್ರ & ಭೈಷಜ್ಯಕಲ್ಪನ-05 ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ರಾಜ್ಯ ಸರ್ಕಾರವು ನೀಡಿರುವ ನಿರಾಕ್ಷೇಪಣಾ ಪತ್ರದ ಆಧಾರದ ಮೇಲೆ ಕೇಂದ್ರ ಸರ್ಕಾರವು ಕೆಲವೊಂದು ಷರತ್ತುಗಳಿಗೊಳಪಟ್ಟು ಅನುಮತಿ ನೀಡಿದೆ ಹಾಗೂ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಕೂಡ Consent of Affiliation ನೀಡಿದೆಯೆಂದು ತಿಳಿಸುತ್ತಾ, ಸದರಿ ಅನುಮತಿ ಪ್ರಮಾಣ ಪತ್ರಗಳ ಆಧಾರದ ಮೇಲೆ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 282 ಪಿಟಿಡಿ 2015, ಬೆಂಗಳೂರು, ದಿನಾಂಕ:05.11.2015** ✓

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು ಇವರಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ **ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 100ಕ್ಕೆ ಹೆಚ್ಚಿಸಲು ಹಾಗೂ ಸ್ನಾತಕೋತ್ತರ ಕೋರ್ಸ್‌ಗಳಾದ ಕಾಯಚಿಕಿತ್ಸಾ-05, ಪಂಚಕರ್ಮ-05 ಮತ್ತು ರಸಶಾಸ್ತ್ರ & ಭೈಷಜ್ಯಕಲ್ಪನ-05** ಸೀಟುಗಳ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿದೆ.

1. ಸರ್ಕಾರಿ ಸೀಟುಗಳ ಹಂಚಿಕೆ ಮತ್ತು ಶುಲ್ಕಗಳ ಬಗ್ಗೆ ಹಾಲಿ ಜಾರಿಯಲ್ಲಿರುವ ಎಲ್ಲಾ ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
2. ಸಂಯೋಜನೆಯ ಬಗ್ಗೆ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ

ATTESTED

Principal
Karnataka Ayurveda Medical College
KECT Towers, Hoigebail
Ashoknagar, Mangalore-06

3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ವಿಧಿಸುವ ಷರತ್ತುಗಳನ್ನು ಪೂರೈಸತಕ್ಕದ್ದು.
4. ಸದರಿ ಕೋರ್ಸಿಗೆ ಸಂಬಂಧಿಸಿದಂತೆ ಕಾಲೇಜಿಗೆ ರಾಜ್ಯ ಸರ್ಕಾರದಿಂದ ಯಾವುದೇ ಅನುದಾನ ಹಾಗೂ ಸೌಲಭ್ಯ ನೀಡಲಾಗುವುದಿಲ್ಲ.
5. ಅನುಮೋದಿತ ಪದವಿ ಕೋರ್ಸ್‌ನ ಸೀಟುಗಳಲ್ಲಿ ಶೇಕಡ 20ರಷ್ಟು ಹಾಗೂ ಸ್ನಾತಕೋತ್ತರ ಸೀಟುಗಳಲ್ಲಿ ಶೇ. 25ರಷ್ಟು ಸರ್ಕಾರಕ್ಕೆ ಬಿಟ್ಟುಕೊಡತಕ್ಕದ್ದು.
6. ಶುಲ್ಕ ವಿಧಿಸುವ ಬಗ್ಗೆ ಸರ್ಕಾರವು ವಿಧಿಸಿರುವ/ವಿಧಿಸಬಹುದಾದ ಷರತ್ತುಗಳು/ನಿಯಮಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
7. ಕೇಂದ್ರ ಸರ್ಕಾರ/ರಾಜ್ಯ ಸರ್ಕಾರ ವಿಧಿಸಿರುವ ಹಾಗೂ ವಿಧಿಸಬಹುದಾದ ಎಲ್ಲಾ ಷರತ್ತುಗಳು ಈ ಕಾಲೇಜಿಗೂ ಅನ್ವಯಿಸುತ್ತವೆ.
8. ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಲಗ್ನತೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾ.ವೈ. ಪ ಮತ್ತು ಸಮನ್ವಯ)
(ದೂರವಾಣಿ ಸಂಖ್ಯೆ:22034292)

ಇವರಿಗೆ:

1. ಕುಲಪತಿಗಳು/ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, ಬೆಂಗಳೂರು.
2. ನಿರ್ದೇಶಕರು, ಆಯುಷ್ ನಿರ್ದೇಶನಾಲಯ, ಧನ್ವಂತರಿ ರಸ್ತೆ, ಬೆಂಗಳೂರು-9.
3. ಪ್ರಾಂಶುಪಾಲರು, ಕರ್ನಾಟಕ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಕೆ.ಇ.ಸಿಟಿ. ಟವರ್ಸ್, ಹೊಗಿಬೈಲು, ಅಶೋಕ ನಗರ ಪೋಸ್ಟ್, ಮಂಗಳೂರು-575 006.
4. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
6. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.